ಕರ್ನಾಟಕ ಸರ್ಕಾರ

ಸಂಖ್ಯೆ: ಡಿಟಿಇ/01/ಇಎಸ್‌ಟಿ(9)/2019/1106

ನಿರ್ದೇಶಕರವರ ಕಛೇರಿ,
ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು-560 001.
ದಿನಾಂಕ: 19-09-2019.

ಹಿಂಬರಹ

ಕರ್ನಾಟಕ ಸರ್ಕಾರದ ಆದೇಶ ಸಂಖ್ಯೆ: ಆಇ 37 ಪಿಇಎನ್ 2019 ದಿನಾಂಕ:31/08/2019ರ ಪ್ರತಿಯನ್ನು, ಮಾಹಿತಿಗಾಗಿ ಈ ಕೆಳಕಂಡವರಿಗೆ ಕಳುಹಿಸಿಕೊಡಲಾಗಿದೆ.

1. ಈ ಇಲಾಖೆಯ ಅಧೀನಕ್ಕೊಳಪಡುವ ಎಲ್ಲಾ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳು, ಸರ್ಕಾರಿ ಪಾಲಿಟೆಕ್ನಿಕ್, ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳು, ಸ್ಟ್ರಿಕ್ ಸಂಸ್ಥೆ, ಬೆಂಗಳೂರು, ಸರ್ಕಾರಿ ಗಣಿ ಶಿಕ್ಷಣ ಶಾಲೆ, ಕೆ.ಜಿ.ಎಫ್ ಸಂಸ್ಥೆಗಳ ಪ್ರಿನ್ಸಿಪಾಲರುಗಳಿಗೆ ಮಾಹಿತಿಗಾಗಿ [ಇಲಾಖಾ ವೆಬ್‌ಸೈಟ್ ಮುಖಾಂತರ]
2. ಈ ನಿರ್ದೇಶನಾಲಯದ ಎಲ್ಲಾ ಅಧಿಕಾರಿಗಳಿಗೆ, ಜಂಟಿ ನಿರ್ದೇಶಕರು(ಆಡಳಿತ), ಆಡಳಿತಾಧಿಕಾರಿ, ಸಹಾಯಕ ಆಡಳಿತಾಧಿಕಾರಿ (2) ಹಾಗೂ (3), ಸಾರ್ವಜನಿಕ ಸಂಪರ್ಕಾಧಿಕಾರಿ ಹಾಗೂ ರಿಜಿಸ್ಟ್ರಾರ್ (ಆಡಳಿತ) ಮಾಹಿತಿಗಾಗಿ
3. ನಿರ್ದೇಶಕರ ಆಪ್ತ ಶಾಖೆಗೆ
4. ಈ ನಿರ್ದೇಶನಾಲಯದ ನಗದು ವಿಭಾಗಕ್ಕೆ ಮಾಹಿತಿಗಾಗಿ
5. ಈ ನಿರ್ದೇಶನಾಲಯದ ಇ.ಎಸ್.ಟಿ.(1) ರಿಂದ (10) ವಿಭಾಗಗಳಿಗೆ ಮಾಹಿತಿಗಾಗಿ
6. ಈ ನಿರ್ದೇಶನಾಲಯದ ಇ-ಆಡಳಿತ ವಿಭಾಗಕ್ಕೆ ಮಾಹಿತಿ ಹಾಗೂ ಮುಂದಿನ ಕ್ರಮಕ್ಕಾಗಿ

ಆಡಳಿತಾಧಿಕಾರಿ

Sh-est(9) Endsmnt

7197

# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ರಾಷ್ಟ್ರೀಯ ಪಿಂಚಣಿ ಯೋಜನೆಯಡಿ(ಎನ್.ಪಿ.ಎಸ್.) ಸರ್ಕಾರದ ವಂತಿಗೆಯನ್ನು ಶೇ. 10 ರಿಂದ ಶೇ. 14ಕ್ಕೆ ಹೆಚ್ಚಿಸುವ ಬಗ್ಗೆ.

ಓದಲಾಗಿದೆ:-

1) ಸರ್ಕಾರಿ ಆದೇಶ ಸಂಖ್ಯೆ: ಆಇ(ಸ್ಪೆಷಲ್) 04 ಪಿಇಟಿ 2005 ದಿನಾಂಕ:31.3.2006.

2) ಸರ್ಕಾರಿ ಆದೇಶ ಸಂಖ್ಯೆ: ಎಫ್‌ಡಿ 01 ಪಿಇಎನ್ 2010 ದಿನಾಂಕ:20.10.2010.

3) ಪತ್ರ ಸಂ. ಖನಿ/ಎನ್.ಪಿ.ಎಸ್/14/2011-12 ದಿನಾಂಕ: 20.05.2019 - ನಿರ್ದೇಶಕರು, ಖಜಾನೆ ನಿರ್ದೇಶನಾಲಯ, ಬೆಂಗಳೂರು ರವರಿಂದ.

ಪ್ರಸ್ತಾವನೆ:-

ಮೇಲೆ ಓದಲಾದ ಸರ್ಕಾರಿ ಆದೇಶ (1) ರಲ್ಲಿ ದಿನಾಂಕ: 01.04.2006 ರಂದು ಮತ್ತು ನಂತರ ಸರ್ಕಾರಿ ಸೇವೆಗೆ ಸೇರುವ ನೌಕರರಿಗೆ ರಾಷ್ಟ್ರೀಯ ಪಿಂಚಣಿ ಯೋಜನೆಯನ್ನು (ಎನ್.ಪಿ.ಎಸ್.) ಕಡ್ಡಾಯಗೊಳಿಸಲಾಗಿದ್ದು, ಈ ಯೋಜನೆಗೆ ಮಾಸಿಕ ವಂತಿಗೆಯು ನೌಕರನಿಂದ ಸಂದಾಯ ಮಾಡಬೇಕಾದ ಮೂಲ ವೇತನ ಮತ್ತು ಅದರ ಮೇಲಿನ ತುಟ್ಟಿಭತ್ಯೆಯ ಶೇ.10ರಷ್ಟು ಇರತಕ್ಕದ್ದು ಮತ್ತು ಅದೇ ಸಮಾನ ಪ್ರಮಾಣದಲ್ಲಿ ರಾಜ್ಯ ಸರ್ಕಾರವು ಭರಿಸಬೇಕೆಂದು ಆದೇಶಿಸಲಾಗಿದೆ.

ಮೇಲೆ ಓದಲಾದ ಸರ್ಕಾರಿ ಆದೇಶ (2)ರಲ್ಲಿ ದಿನಾಂಕ: 01.01.2004ರಂದು ಅಥವಾ ತರುವಾಯ ಅಖಿಲ ಭಾರತ ಸೇವೆಗೆ ನೇಮಕಗೊಂಡು ಕರ್ನಾಟಕ ವೃಂದದ ಸೇವೆಗೆ ಒಳಪಟ್ಟಿರುವ ಎಲ್ಲಾ ಅಧಿಕಾರಿಗಳಿಗೆ ರಾಷ್ಟ್ರೀಯ ಪಿಂಚಣಿ ಯೋಜನೆಯನ್ನು(ಎನ್.ಪಿ.ಎಸ್.) ಕಡ್ಡಾಯವಾಗಿ ಜಾರಿಗೊಳಿಸಲಾಗಿದ್ದು, ಈ ಯೋಜನೆಗೆ ಅಖಿಲ ಭಾರತ ಸೇವೆಯ ಅಧಿಕಾರಿಯ ಮಾಸಿಕ ವಂತಿಗೆಯು ಮೂಲ ವೇತನ (ಇದರಲ್ಲಿ ಶ್ರೇಣಿ ವೇತನ ಮತ್ತು ತುಟ್ಟಿಭತ್ಯೆ ಏನಾದರೂ ಇದ್ದರೆ ಅದನ್ನು ಒಳಗೊಂಡಿರುತ್ತದೆ) ಮತ್ತು ತುಟ್ಟಿಭತ್ಯೆಯ ಶೇ.10ರಷ್ಟಿರತಕ್ಕದ್ದು ಮತ್ತು ಇದನ್ನು ಸದರಿ ಅಧಿಕಾರಿಗಳ ಸಂಬಳದಿಂದ ಪ್ರತಿ ತಿಂಗಳು ಸಂಬಂಧಪಟ್ಟ ಹಣ ಸೆಳೆಯುವ ಮತ್ತು ಬಟವಾಡೆ ಅಧಿಕಾರಿಯು ಕಡಿತ ಮಾಡತಕ್ಕದ್ದು. ಅದೇ ಸಮಾನ ಪ್ರಮಾಣದಲ್ಲಿ ರಾಜ್ಯ ಸರ್ಕಾರವು ಭರಿಸಬೇಕೆಂದು ಆದೇಶಿಸಲಾಗಿದೆ.



BBF (G) / ADO

25770 /9/19

16/9/19

ಮೇಲೆ ಓದಲಾದ (3) ರ ಪತ್ರದಲ್ಲಿ, ನಿರ್ದೇಶಕರು, ಖಜಾನೆ ನಿರ್ದೇಶನಾಲಯ, ಬೆಂಗಳೂರು ರವರು, ಕೇಂದ್ರ ಸರ್ಕಾರದ ಎನ್.ಪಿ.ಎಸ್. ಅಧಿಕಾರಿ/ನೌಕರರಿಗೆ ದಿನಾಂಕ: 01.04.2019ರಿಂದ ಅನ್ವಯಿಸುವಂತೆ ಸರ್ಕಾರದ ವಂತಿಗೆಯನ್ನು 10% ರಿಂದ 14% ಕ್ಕೆ ಹೆಚ್ಚಿಸಿರುವುದರಿಂದ, ರಾಜ್ಯದಲ್ಲಿನ ಅಖಿಲ ಭಾರತ ಸೇವೆಯ (ಕರ್ನಾಟಕ ಕೇಡರ್) ಅಧಿಕಾರಿಗಳಿಗೆ ಹಾಗೂ ಎಲ್ಲಾ ಎನ್.ಪಿ.ಎಸ್. ರಾಜ್ಯ ಸರ್ಕಾರಿ ನೌಕರರಿಗೂ ಸಹಾ ಸರ್ಕಾರದ ವಂತಿಗೆಯನ್ನು ದಿನಾಂಕ: 01.042019 ರಿಂದ ಶೇಕಡಾ 14ಕ್ಕೆ ಹೆಚ್ಚಿಸಬೇಕಾಗಿರುತ್ತದೆಂದು, ಈ ಬಗ್ಗೆ ಶೀಘ್ರ ಸರ್ಕಾರದ ಆದೇಶ ಹೊರಡಿಸುವಂತೆ ಕೋರಿರುತ್ತಾರೆ.

ಪ್ರಸ್ತಾವನೆಯನ್ನು ಪರಿಶೀಲಿಸಿ, ಈ ಕೆಳಗಿನಂತೆ ಆದೇಶ ಹೊರಡಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಆಇ 37 ಪಿಇಎನ್ 2019, ಬೆಂಗಳೂರು, ದಿನಾಂಕ :31.08.2019**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ರಾಷ್ಟ್ರೀಯ ಪಿಂಚಣಿ ಯೋಜನೆಯಡಿಯಲ್ಲಿ(ಎನ್.ಪಿ.ಎಸ್.) ರಾಜ್ಯದ ಅಖಿಲ ಭಾರತ ಸೇವೆಯ (ಕರ್ನಾಟಕ ಕೇಡರ್) ಅಧಿಕಾರಿಗಳಿಗೆ ಹಾಗೂ ಎಲ್ಲಾ ಎನ್.ಪಿ.ಎಸ್ ರಾಜ್ಯ ಸರ್ಕಾರಿ ಅಧಿಕಾರಿ/ನೌಕರರಿಗೂ ಸರ್ಕಾರದ ವಂತಿಗೆಯನ್ನು ದಿನಾಂಕ: 01.04.2019ರಿಂದ ಜಾರಿಗೆ ಬರುವಂತೆ ಶೇ. 10 ರಿಂದ ಶೇಕಡಾ 14ಕ್ಕೆ (ಮೂಲವೇತನ + ತುಟ್ಟಿಭತ್ಯೆ) ಹೆಚ್ಚಿಸಲು ಸರ್ಕಾರವು ಹರ್ಷಿಸುತ್ತದೆ.

ಈ ವೆಚ್ಚವನ್ನು ಲೆಕ್ಕ ಶೀರ್ಷಿಕೆ "2071-01-117-0-01 ಯೋಜನೇತರ 251" ರಡಿಯಲ್ಲಿ ಭರಿಸತಕ್ಕದ್ದು.

ದಿನಾಂಕ: 01.04.2019ರಿಂದ ಹೆಚ್ಚುವರಿಯಾಗಿ ಪಾವತಿಸುವ ಸರ್ಕಾರದ ವಂತಿಗೆಗೆ ಯಾವುದೇ ರೀತಿಯ ಬಡ್ಡಿಯನ್ನು ನೀಡಲಾಗುವುದಿಲ್ಲ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,
31.8.
(ಪ್ರಕಾಶ್.ವೈ.ಕೆ)
ಸರ್ಕಾರದ ಜಂಟಿ ಕಾರ್ಯದರ್ಶಿ
ಆರ್ಥಿಕ ಇಲಾಖೆ(ವಿಶ್ರಾಂತಿ ವೇತನ).

ಇವರಿಗೆ:

1) ಸರ್ಕಾರದ ಮುಖ್ಯ ಕಾರ್ಯದರ್ಶಿ/ ಅಪರ ಮುಖ್ಯ ಕಾರ್ಯದರ್ಶಿಗಳು.

2) ಮಹಾಲೇಖಪಾಲರು (ಲೆಕ್ಕಪತ್ರ / ಲೆಕ್ಕಪರಿಶೋಧನೆ) ಜಿ.ಎಂ ಶಾಖೆ , ಬೆಂಗಳೂರು.
3) ಸರ್ಕಾರದ ಮುಖ್ಯಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಸಚಿವ ಸಂಪುಟ ಶಾಖೆ.(ವಿಷಯ ಸಂಖ್ಯೆ:ಸಿ:487/2019)
4) ಅಪರಮುಖ್ಯಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರು, ವಿಧಾನಸೌಧ, ಬೆಂಗಳೂರು.
5) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿಗಳು.
6) ಎಲ್ಲಾ ಇಲಾಖಾ ಮುಖ್ಯಸ್ಥರುಗಳು / ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು.
7) ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
8) ನಿವಾಸಿ ಆಯುಕ್ತರ ಕಚೇರಿ, ಕೌಟಿಲ್ಯ ಮಾರ್ಗ, ಚಾಣಕ್ಯಪುರಿ, ನವದೆಹಲಿ.
9) ರಿಜಿಸ್ಟ್ರಾರ್ ಜನರಲ್, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
10) ಕಾರ್ಯದರ್ಶಿ, ಕರ್ನಾಟಕ ವಿಧಾನ ಸಭೆ / ಕರ್ನಾಟಕ ವಿಧಾನ ಪರಿಷತ್ತು, ಬೆಂಗಳೂರು.
11) ರಿಜಿಸ್ಟ್ರಾರ್, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
12) ರಿಜಿಸ್ಟ್ರಾರ್, ಕರ್ನಾಟಕ ಆಡಳಿತ ನ್ಯಾಯ ಮಂಡಳಿ, ಬೆಂಗಳೂರು.
13) ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಬೆಂಗಳೂರು.

(8–13) ಪತ್ರದ ಮೂಲಕ

14) ಖಜಾನಾಧಿಕಾರಿಗಳು, ರಾಜ್ಯ ಹುಜೂರು ಖಜಾನೆ, ಬೆಂಗಳೂರು ಮತ್ತು ಎಲ್ಲಾ ಜಿಲ್ಲಾ ಖಜಾನೆಗಳು.
15) ಸಂಕಲನಕಾರರು, ಕರ್ನಾಟಕ ಗೆಜೆಟ್‌ನ ಮುಂದಿನ ಪ್ರಕಟಣೆಯಲ್ಲಿ ಪ್ರಕಟಿಸುವುದಕ್ಕಾಗಿ.
16) ಸರ್ಕಾರದ ಉಪಕಾರ್ಯದರ್ಶಿ(ಸೇವೆಗಳು), ಸಿ.ಆ.ಸು.ಇ., ವಿಧಾನಸೌಧ.
17) ನಿರ್ದೇಶಕರು, ರಾಜ್ಯ ಲೆಕ್ಕಪತ್ರ ಇಲಾಖೆ, ಶಾಂತಿನಗರ, ಬೆಂಗಳೂರು.
18) ಉಪನಿರ್ದೇಶಕರು, ಎನ್.ಪಿ.ಎಸ್. ಘಟಕ, ವಿ.ವಿ.ಟವರ್, ಬೆಂಗಳೂರು.
19) ಸೀನಿಯರ್ ಪ್ರೋಗ್ರಾಮರ್, ಹೆಚ್.ಆರ್.ಎಂ.ಎಸ್., ಸಿಆಸುಇ(ಇ-ಆಡಳಿತ) – ಈ ಬಗ್ಗೆ ಕೂಡಲೇ ಅಗತ್ಯ ಕ್ರಮ ವಹಿಸುವಂತೆ ಕೋರಿದೆ.
20) ಸರ್ಕಾರದ ಅಧೀನ ಕಾರ್ಯದರ್ಶಿ, ಸಿಆಸುಇ(ಲೆಕ್ಕಪತ್ರ-ಐಆರ್‌ಎಲ್‌ಎ), ಬಹುಮಹಡಿ ಕಟ್ಟಡ.
21) ಅಧ್ಯಕ್ಷರು, ಅಖಿಲ ಭಾರತ ಸೇವೆಯ ಅಧಿಕಾರಿಗಳಸಂಘ, ಬೆಂಗಳೂರು.
22) ಅಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಕಬ್ಬನ್ ಉದ್ಯಾನವನ.
23) ಅಧ್ಯಕ್ಷರು, ಕರ್ನಾಟಕ ರಾಜ್ಯ ಎನ್.ಪಿ.ಎಸ್.ನೌಕರರ ಸಂಘ, ಬೆಂಗಳೂರು.
24) ಅಧ್ಯಕ್ಷರು, ಕರ್ನಾಟಕ ರಾಜ್ಯ ನೂತನ ಪಿಂಚಣಿ ಯೋಜನೆಗೆ ಒಳಪಡುವ ಸರ್ಕಾರಿ ನೌಕರರ ಸಂಘ (ರಿ), ಬೆಂಗಳೂರು.
25) ಕರ್ನಾಟಕ ಸರ್ಕಾರದ ಸಚಿವಾಲಯದ ಎಲ್ಲಾ ಶಾಖೆಗಳು
26) ಕರ್ನಾಟಕ ಸರ್ಕಾರ ಸಚಿವಾಲಯದ ಗ್ರಂಥಾಲಯ / ವಿಧಾನ ಮಂಡಲದ ಗ್ರಂಥಾಲಯ,
27) ವಾರಪತ್ರ / ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.

ಆರ್ಥಿಕ ಇಲಾಖೆಯ ಅಂತರ್ಜಾಲತಾಣ: www.finance.kar.nic.in ವೀಕ್ಷಿಸಿ